ವಿಜಯವಾಣಿ
ಕನ್ನಡಿಗರ ಧ್ವನಿ

**Thursday 10th August 2023, Page No.5A**

# RVCE: Symposium on Green Bangalore for next generation

# ಮುಂದಿನ ಪೀಳಿಗೆಗೆ ಹಸಿರು ಬೆಂಗಳೂರು



ವಿಜಯವಾಣಿ ಚಿತ್ರ

**ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ವಿಚಾರ ಸಂಕಿರಣದಲ್ಲಿ ಪ್ರೀತಿ ಗೆಹ್ಲೋಟ್, ಸರೀನಾ ಸಿಕ್ಕಲಿಗರ್, ವಿಜಯ್ ಕುಮಾರ್ ಹರಿದಾಸ್, ಕೆ.ಎನ್.ಸುಬ್ರಮಣ್ಯ ಉಪಸ್ಥಿತರಿದ್ದರು.**

**ಬೆಂಗಳೂರು:** ಬೆಂಗಳೂರನ್ನು ಹಸಿರುಮಯ ನಗರವನ್ನಾಗಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಉತ್ತಮ ಯೋಜನೆಯನ್ನು ರೂಪಿಸಿ ಮುಂದಿನ ಪೀಳಿಗೆ ಉತ್ತಮ ಪರಿಸರ ನಿರ್ಮಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಬ್ರ್ಯಾಂಡ್ ಬೆಂಗಳೂರು ಭಾಗವಾಗಿರುವ ಹಸಿರು ಬೆಂಗಳೂರಿನ ನೋಡಲ್ ಅಧಿಕಾರಿ ಪ್ರೀತಿ ಗೆಹ್ಲೋಟ್ ತಿಳಿಸಿದ್ದಾರೆ.

**ಬಿಬಿಎಂಪಿ ನೋಡಲ್ ಅಧಿಕಾರಿ ಪ್ರೀತಿ ಗೆಹ್ಲೋಟ್ ಹೇಳಿಕೆ**

ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ ಹಸಿರು/ಪರಿಸರ ಬೆಂಗಳೂರು ವಿಷಯಕ್ಕೆ ಸಂಬಂಧಿಸಿದಂತೆ ಆರ್.ವಿ. ತಾಂತ್ರಿಕ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ವಿಚಾರಸಂಕಿರಣದಲ್ಲಿ ಅವರು ಮಾತನಾಡಿದರು. ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ 7 ವಿವಿಧ ವಿಷಯಗಳಡಿ ಬರುವ ಹಸಿರು ಬೆಂಗಳೂರನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಅಗತ್ಯವಿದೆ. ಈ ಸಂಬಂಧ ನಾಗರಿಕರಿಂದ ಬಂದಿರುವ ಸಲಹೆಗಳನ್ನು ಅಧ್ಯಯನ ನಡೆಸಿ ಕ್ರೋಡೀಕರಿಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ನಗರದಲ್ಲಿ ಈಗಾಗಲೆ ಶೈಕ್ಷಣಿಕ ಸಂಸ್ಥೆಗಳ ಜತೆ ಒಡಂಬಡಿಕೆ ಮಾಡಿಕೊಂಡು, ಸಸಿಗಳನ್ನು ನೆಟ್ಟು, ಪೋಷಣೆ ಮಾಡಲು ವಿದ್ಯಾರ್ಥಿಗಳಿಗೆ ಜವಾಬ್ದಾರಿ ನೀಡಲಾಗಿದೆ. ಆ ಸಸಿಗೆ ವಿದ್ಯಾರ್ಥಿಗಳ ಹೆಸರನ್ನು ಶಾಶ್ವತವಾಗಿ ಇಡುವ ಯೋಜನೆ ರೂಪಿಸಲಾಗಿದ್ದು, ಈಗಾಗಲೆ ಕಾರ್ಯಪ್ರವೃತ್ತರಾಗಿ ಕೆಲಸ ಮಾಡಲಾಗುತ್ತಿದೆ ಎಂದರು. ಉಪ ಅರಣ್ಯ ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲಿಗರ್, ಕೆರೆಗಳ ವಿಭಾ ಗದ ಮುಖ್ಯ ಅಭಿಯಂತರ ವಿಜಯ್‌ಕುಮಾರ್ ಹರಿದಾಸ್, ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಕೆ.ಎನ್. ಸುಬ್ರಮಣ್ಯ ಉಪಸ್ಥಿತರಿದ್ದರು.